**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ.2133/2023.**
**ದಿನಾಂಕಃ20.03.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**

| | | |
|---|---|---|
| ಸಾಕ್ಷಿಯ ಹೆಸರು | ಚೌಡಪ್ಪ | ಚಾಸಾ2, ಪ್ರಾಸ-2 |
| ತಂದೆಯ ಹೆಸರು | ಮಲ್ಲಪ್ಪ | |
| ವಯಸ್ಸು | 40 ವರ್ಷ | |
| ಉದ್ಯೋಗ | ಕೂಲಿ ಕೆಲಸ | |
| ವಾಸ | ಚಿಕ್ಕಬಾಸೂರು ಗ್ರಾಮ | |

ಚಾಸಾ 1, 3 ಮತ್ತು ಆರೋಪಿತರು ನನಗೆ ಪರಿಚಯವಿರುತ್ತಾರೆ. ಸಾಕ್ಷಿಯು ಪೊಲೀಸ್ ನೋಟೀಸ್ ಅನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ3 ಎಂದು ಸಾಕ್ಷಿಯ ಸಹಿಯನ್ನು ನಿಪಿ3 ಎ ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ಈಗಾಗಲೇ ಗುರುತಿಸಿರುವ ನಿಪಿ 2 ಮಹಜರಿನಲ್ಲಿನ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ2 ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 1 ವರ್ಷದ ಹಿಂದೆ ಚಿಕ್ಕಬಾಸೂರಿನ ಪುಟ್ಟಪ್ಪ ರವರ ಮನೆ ಬಳಿ ಪೊಲೀಸರು ಮಹಜರಿಗೆ ಬಂದು ನನ್ನನ್ನು ಕರೆದು ಒಂದು ಸಹಿ ಪಡೆದುಕೊಂಡಿರುತ್ತಾರೆ. ಯಾವ ವಿಚಾರಕ್ಕೆ ಸಹಿ ಪಡೆದರು ಎಂದುಲ ನನಗೆ ಗೊತ್ತಿಲ್ಲ. ಮಹಜರ್ ಕಾಲದಲ್ಲಿ ಮತ್ತಿಬ್ಬರು ಇದ್ದರು, ಅವರ ಹೆಸರು ನನಗೆ ಗೊತ್ತಿಲ್ಲ. ಮಹಜರ್ ಅನ್ನು ಆ ದಿನ ಸಂಜೆ 4.30 ರಿಂದ 5.30 ಗಂಟೆ ತನಕ ಮಾಡಿರುತ್ತಾರೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯು ಈಗಾಗಲೇ ಗುರುತಿಸಿರುವ ಮು ಮಾ 1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ಮು ಮಾ 1ಎ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ ಹಾಕಿರುತ್ತೇನೆ ಎಂದು ಗೊತ್ತಿಲ್ಲ. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಕೋರಿಕೆಯಂತೆ ಮಹಜರಿಗೆ ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿಃ20.04.2023 ರಂದು ಸಂಜೆ 6 ಗಂಟೆ ಸಮಯದಲ್ಲಿ 1 ರಿಂದ 3 ನೇ ಆರೋಪಿತರು ಮತ್ತು ಚಾಸಾ 1 ರವರ ನಡುವೆ ಗಲಾಟೆಯಾದ ವಿಚಾರವಾಗಿ ಪೊಲೀಸರು ಮಹಜರಿಗಿ ಬನ್ನಿ ಎಂದು ನಮಗೆ ನಿಪಿ3 ರಂತೆ ನೋಟೀಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ಅದರಂತೆ ನಂತರ ಪೊಲೀಸರು ದಿಃ27.04.2023 ರಂದು ಸಂಜೆ 5 ಗಂಟೆಗೆ ಸಳ್ಥಕ್ಕೆ ಬಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು 3 ರವರ ಸಮಕ್ಷಮ 5.30 ತನಕ ಮಹಜರ್ ಮಾಡಿ ಮು ಮಾ 1 ಕೋಲನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ನನಗೆ ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ</u>** ಆರೋಪಿ ಪರ ಶ್ರೀ ಎಂ ಜಿ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆ ಃ ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಒ,
ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾಃದಂ.,ರವರು, ಕಡೂರು